# ಕರ್ನಾಟಕ ವಿಧಾನ ಪರಿಷತ್ತು.

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 66 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ). |
| ಉತ್ತರಿಸಬೇಕಾದ ದಿನಾಂಕ | : | 15.02.2022 |
| ಉತ್ತರಿಸಬೇಕಾದ ಸಚಿವರು | : | ನಗರಾಭಿವೃದ್ಧಿ ಸಚಿವರು. |

********

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಮೈಸೂರು ತಾಲ್ಲೂಕು ಬಲ್ಲಹಳ್ಳಿ ಗ್ರಾಮದಲ್ಲಿ ವಸತಿ ಯೋಜನೆಗೆ ಎಷ್ಟು ಎಕರೆ ಪ್ರದೇಶವನ್ನು ಭೂಸ್ವಾಧೀನಪಡಿಸಿಕೊಳ್ಳಲು ಯಾವಾಗ ಅಧಿಸೂಚನೆ ಹೊರಡಿಸಲಾಗಿದೆ; | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಮೈಸೂರು ತಾಲ್ಲೂಕು, ಬಲ್ಲಹಳ್ಳಿ ಗ್ರಾಮದ ವಿವಿಧ ಸರ್ವೆ ನಂಬರುಗಳಲ್ಲಿ ವಸತಿ ಯೋಜನೆಗಾಗಿ 381ಎಕರೆ 01ಗುಂಟೆ ವಿಸ್ತೀರ್ಣದ ಭೂಮಿಯನ್ನು ಸ್ವಾಧೀನ ಪ್ರಕ್ರಿಯೆಗೆ ಒಳಪಡಿಸಲು ದಿನಾಂಕ: 28.06.2016 ರಂದು ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿದೆ. ಹೊಸ ಭೂಸ್ವಾಧೀನ ಕಾಯ್ದೆಯಂತೆ ಅಂತಿಮ ಅಧಿಸೂಚನೆ ಪ್ರಕ್ರಿಯೆ ಪ್ರಾರಂಭಿಸುವ ಪೂರ್ವದಲ್ಲಿ ಪರಸ್ಪರ ಒಪ್ಪಿಗೆಯಂತೆ ಜಂಟಿ ಅಭಿವೃದ್ಧಿ ಯೋಜನೆಯಡಿಯಲ್ಲಿ ಅಭಿವೃದ್ಧಿಪಡಿಸಲು ಪ್ರಾಧಿಕಾರ ಹಾಗೂ ರೈತರು ಆಸಕ್ತಿ ವ್ಯಕ್ತಪಡಿಸಿರುವುದರಿಂದ ಪರಸ್ಪರ ಒಪ್ಪಂದದ ಮೇರೆಗೆ ಅಭಿವೃದ್ಧಿಪಡಿಸಲು ಕ್ರಮವಹಿಸಲಾಗುತ್ತಿದೆ. |
| ಆ | ಸದರಿ ಯೋಜನೆ ಸಂಬಂಧ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಇ | ಸದರಿ ಯೋಜನೆ ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸದಿರಲು ಕಾರಣಗಳೇನು: | ಪ್ರಸ್ತಾಪಿತ ಬಡಾವಣೆಯನ್ನು ಪರಸ್ಪರ ಒಪ್ಪಂದದ ಮೇರೆಗೆ ಅಭಿವೃದ್ಧಿ ಪಡಿಸಲು ಕೆಲವು ರೈತರು/ ವಾರಸುದಾರರು ಆಸಕ್ತಿ ತೋರಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಒಪ್ಪಿಗೆ ಪತ್ರ ನೀಡಿರುತ್ತಾರೆ. ಕೆಲವು ಭೂ ಮಾಲೀಕರು ವಿರೋಧ ವ್ಯಕ್ತಪಡಿಸಿರುತ್ತಾರೆ. ಈ ಸಂಬಂಧ ಸಮಾಲೋಚನೆ/ಅವರುಗಳನ್ನು ಮನವೊಲಿಸಲು ಪ್ರಾಧಿಕಾರದ ವತಿಯಿಂದ ಪ್ರಯತ್ನಿಸಲಾಗುತ್ತಿರುವುದರಿಂದ ವಿಳಂಭವಾಗಿರುತ್ತದೆ. ಪ್ರಾಥಮಿಕ ಅಧಿಸೂಚನೆಯಲ್ಲಿ ಸ್ವಾಧೀನಕ್ಕೊಳಪಡಿಸಿರುವ ಎಲ್ಲಾ ರೈತರು/ ವಾರಸುದಾರರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪರಸ್ಪರ ಒಪ್ಪಂದದ ಮೇರೆಗೆ ಬಡಾವಣೆಯನ್ನು ಅಭಿವೃದ್ಧಿ ಪಡಿಸಲು ಆದ್ಯತೆ ಮೇರೆಗೆ ಕ್ರಮವಹಿಸಲಾಗುವುದು. |
| ಈ | ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿರುವ ಭೂ ಮಾಲೀಕರು ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಉ | ಹಾಗಿದ್ದಲ್ಲಿ, ಯಾವ ಕಾಲ ಮಿತಿಯಲ್ಲಿ ಯಾವ ಮಾದರಿಯಲ್ಲಿ ರೈತರಿಗೆ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗುವುದು? | |

ಸಂಖ್ಯೆ: ನಅಇ 41 ಮೈಅಪ್ರಾ 2022 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು